# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ: | 2361 |
| ಸದಸ್ಯರ ಹೆಸರು: | ಶ್ರೀ ಗೋವಿಂದ ರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | 27-03-2026 |
| ಉತ್ತರಿಸುವ ಸಚಿವರು: | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷದಿಂದ ಇಲ್ಲಿಯವರೆಗೂ ನಡೆದಿರುವ ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು) | ರಾಜ್ಯದಲ್ಲಿ 2022-23 ನೇ ಸಾಲಿನಿಂದ 2025-26ನೇ ಸಾಲಿನವರೆಗೆ (02.03.2026 ರವರೆಗೆ) ಅನುಕ್ರಮವಾಗಿ 1049, 1257, 1194 ಮತ್ತು 671 ಒಟ್ಟು 4171 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುತ್ತವೆ<br>ವರ್ಷವಾರು ಹಾಗೂ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಸರ್ಕಾರದಿಂದ ನೀಡಲಾಗಿರುವ ಪರಿಹಾರ ಏನು ಹಾಗೂ ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ:ಕೃಇ 57 ಕೃಉಇ 2015 (ಭಾಗ-1) ದಿನಾಂಕ:11.11.2015ರ ರನ್ವಯ ಕೃಷಿ ಸಾಲದ ಹೊರೆಯಿಂದ ಆತ್ಮಹತ್ಯೆಗೆ ಶರಣಾದ ಅರ್ಹ ರೈತ ಕುಟುಂಬದ ವಾರಸುದಾರರಿಗೆ ರೂ.5.00 ಲಕ್ಷಗಳ ಮೊತ್ತವನ್ನು ಪರಿಹಾರವಾಗಿ ಪಾವತಿಸಲಾಗುತ್ತಿದೆ. (ಪ್ರತಿ ಲಗತ್ತಿಸಿದೆ.) ಪ್ರಸ್ತುತ ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಪರಿಹಾರ ನೀಡುವ ವಿಷಯವು ಕಂದಾಯ ಇಲಾಖೆಗೆ ಒಳಪಡುತ್ತದೆ.<br>ರೈತರ ಆತ್ಮಹತ್ಯೆ ತಡೆಯಲು ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ಅನುಬಂಧ-2 ರಲ್ಲಿ ನೀಡಲಾಗಿದೆ. |
| ಇ) | ರಾಜ್ಯದಲ್ಲಿ ಕಳೆದ 3 ವರ್ಷಗಳ ಅವಧಿಯಲ್ಲಿ 2416 ಮಂದಿ ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ (2022-23 ರಿಂದ 2024-25 ರವರೆಗೆ) ಒಟ್ಟು 3500 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುತ್ತವೆ.<br>ಕಳೆದ 3 ವರ್ಷಗಳ ಪರಿಹಾರ ಪಾವತಿಸಿರುವ ಮಾಹಿತಿಯು ಈ ಕೆಳಕಂಡಂತಿದೆ. |

| ಯೋಜನೆ | 2023-24 | 2024-25 | 2025-26 (ಈವರೆವಿಗೂ) |
|---|---|---|---|
| ರೈತರ ಆತ್ಮಹತ್ಯೆ ಪ್ರಕರಣ | 1080 | 986 | 468 |

| | | |
|---|---|---|
| ಈ) | ರೈತರ ಆತ್ಮಹತ್ಯೆಯನ್ನು ಯಾವ ಕಾರಣಗಳಿಂದ ಮಾಡಿಕೊಳ್ಳುತ್ತಿದ್ದಾರೆ ಎಂಬುದು ಸರ್ಕಾರ ಪರಿಶೀಲಿಸಿದೆಯೇ; | ವಿವಿಧ ಸಮಿತಿ/ಮೂಲಗಳ ಪ್ರಕಾರ ಆತ್ಮಹತ್ಯೆಗೆ ಆರ್ಥಿಕ ಪರಿಸ್ಥಿತಿ, ಸಾಮಾಜಿಕ ಮತ್ತು ಸಾಂಸಾರಿಕ ಸಮಸ್ಯೆಗಳು, ಸಾಮರ್ಥ್ಯಕ್ಕೆ ಮೀರಿದ ಸಾಲ, ಬೆಳೆ ನಷ್ಟ, ಪ್ರಕೃತಿ ವಿಕೋಪ, ಸಾಲ ಬಾಧೆ, ಹವಾಮಾನ ವೈಪರೀತ್ಯಗಳು, ಅನಾರೋಗ್ಯ, ಕೌಟುಂಬಿಕ ಕಾರಣಗಳು ಹಾಗೂ ಇತರೆ ವಿವಿಧ ಸಮಸ್ಯೆಗಳು ಕಾರಣಗಳಾಗಿರುತ್ತವೆ. |
| ಉ) | ಕಳೆದ 3 ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ಮೊತ್ತದ ರೈತರ ಸಾಲ ಮನ್ನಾ ಮಾಡಲಾಗಿದೆ ಹಾಗೂ ಕೇಂದ್ರ ಸರ್ಕಾರದಿಂದ ಎಷ್ಟು ಫಲಾನುಭವಿಗಳಿಗೆ ಆರ್ಥಿಕ ನೆರವು ದೊರೆತಿದೆ; | ಕಳೆದ 03 ವರ್ಷದಿಂದ ಸಹಕಾರ ಸಂಸ್ಥೆಗಳಲ್ಲಿ ರೈತರ ಯಾವುದೇ ಸಾಲವನ್ನು ಸರ್ಕಾರದಿಂದ ಮನ್ನಾ ಮಾಡಿರುವುದಿಲ್ಲ.<br>ಕೇಂದ್ರ ಸರ್ಕಾರದ ರೂ.3.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಸಹಕಾರ ಸಂಘಗಳ ಮೂಲಕ ರೈತರಿಗೆ ನಿವ್ವಳ ಶೇ.4.ರ ಬಡ್ಡಿದರದಲ್ಲಿ ವಿತರಿಸುವ ಯೋಜನೆಯನ್ನು ನಬಾರ್ಡ್ ನಿರ್ವಹಿಸುತ್ತಿದೆ. |
| ಊ) | ರೈತರ ನೆರವಿಗೆ ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ನೀಡಲಾಗುತ್ತಿರುವ ಯೋಜನೆಗಳು ಯಾವುವು? | ಸಹಕಾರ ಇಲಾಖೆಯಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ಈ ಕೆಳಕಂಡ ಬಡ್ಡಿ ಸಹಾಯಧನ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ<br>1) ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ/ ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ನಿವ್ವಳ ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ.<br>2) ರೂ.15.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು ಶೇ.3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>3) ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ವಿತರಿಸುವ ಅಡಮಾನ ಸಾಲವನ್ನು ಶೇ.7 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>4) ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಸಹಕಾರ ಸಂಘಗಳು ಏಳು ಲಕ್ಷ ರೂ.ವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>5) ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಗೋದಾಮು ಅನುವಾಗುವಂತೆ ನಿರ್ಮಿಸಲು ಬ್ಯಾಂಕುಗಳು ನೀಡುವ 20 ಲಕ್ಷ ರೂ.ವರೆಗಿನ ಸಾಲಕ್ಕೆ ಸರ್ಕಾರ ಶೇ.7 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನ.<br>6)ರೈತರಿಗೆ ಇರುವ ಕೇಂದ್ರ ಸರ್ಕಾರದ ಯೋಜನೆ: ಸಹಕಾರ ಸಂಘಗಳ ಮೂಲಕ ರೈತರಿಗೆ ಪಶುಸಂಗೋಪನೆ/ಮೀನುಗಾರಿಕೆ |

| | | |
|---|---|---|
| | | ಉದ್ದೇಶಗಳಿಗೆ ರೂ.2.00 ಲಕ್ಷಗಳ ದುಡಿಯುವ ಬಂಡವಾಳದ ಸಾಲ ಒಳಗೊಂಡಂತೆ ರೂ.3.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲ ಶೇ.7ರ ಬಡ್ಡಿ ದರದಲ್ಲಿ ನೀಡಲಾಗುತ್ತಿದ್ದು, ಮರುಪಾವತಿಗೆ ನಿಗದಿಪಡಿಸಿದ ಅವಧಿಯೊಳಗೆ ರೈತರು ಸಾಲ ಮರುಪಾವತಿಸಿದಲ್ಲಿ ಶೇ.3 ರ ಪ್ರೋತ್ಸಾಹ ಧನ ದೊರೆಯುವುದರಿಂದ ರೈತರಿಗೆ ನಿವ್ವಳ ಶೇ.4 ರ ಬಡ್ಡಿ ದರದಲ್ಲಿ ಬೆಳೆ ಸಾಲ ದೊರೆಯುವ ಯೋಜನೆ ನಬಾರ್ಡ್ ಮೂಲಕ ಜಾರಿಯಲ್ಲಿದೆ.<br><br>2025-26ನೇ ಸಾಲಿನಲ್ಲಿ ರೈತರ ನೆರವಿಗಾಗಿ ಕೃಷಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳು ಈ ಕೆಳಕಂಡಂತಿವೆ:<br>1. ಮುಖ್ಯಮಂತ್ರಿ ರೈತ ವಿದ್ಯಾನಿಧಿ<br>2. ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ<br>3. ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು<br>4. ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ<br>5. ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು<br>6. ಹೊಸ ಬೆಳೆ ವಿಮಾ ಯೋಜನೆ<br>7. ಬೆಳೆ ಸಮೀಕ್ಷೆ<br>8. ಕೃಷಿ ಭಾಗ್ಯ<br>9. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ರಾಜ್ಯದ ಹೆಚ್ಚುವರಿ ಪಾಲಿನ ಅನುದಾನ<br>10. ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ (ಕೃಷೋನ್ನತಿ ಯೋಜನೆ)<br>11. ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ NFSNM-ಬೀಜ ಘಟಕಗಳು<br>12. PM-RKVY- ಬೆಳೆ ವೈವಿಧ್ಯೀಕರಣ ಯೋಜನೆ<br>13. ಕೃಷಿ ವಿಸ್ತರಣೆ (ATMA)<br>14. PM-RKVY- ಕೃಷಿ ಯಾಂತ್ರೀಕರಣ ಉಪ ಅಭಿಯಾನ<br>15. ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ಎಣ್ಣೆಕಾಳು ಪ್ರಧಾನ ಮಂತ್ರಿ<br>16. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (PM-RKVY)<br>17. PM-RKVY-ಮಣ್ಣು ಆರೋಗ್ಯ ಮತ್ತು ಫಲವತ್ತತೆ (PM-RKVY-SH&F)<br>18. ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ<br>19. ಡಿಜಿಟಲ್ ಬೆಳೆ ಸಮೀಕ್ಷೆ |

| | | |
|---|---|---|
| | | 20. ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತೆ ಅಭಿಯಾನ<br>ರೈತರ ನೆರವಿಗೆ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನದಲ್ಲಿರುವ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳು ಕೆಳಕಂಡಂತ್ತಿವೆ;<br>1. ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC-PMKSY 2.0)<br>2. ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD-RKVY)<br>3. ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆ<br>4. ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ - ಇತರೆ ಉಪಚಾರಗಳು (PMKSY - OI)<br>5. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RKVY-RPS) |

**(ಪಿ.ಎಂ. ನರೇಂದ್ರಸ್ವಾಮಿ)**
ಕೃಷಿ ಸಚಿವರು

| ಅನುಬಂಧ-1 ಎಲ್.ಸಿ.ಕ್ರ 2074(2161) | | | | | |
|---|---|---|---|---|---|
| ರೈತರ ಆತ್ಮಹತ್ಯೆ ವರದಿ ಪ್ರಕರಣಗಳು | | | | | |
| ಕ್ರ. ಸಂ | ಜಿಲ್ಲೆಗಳು | 2022-23 | 2023-24 | 2024-25 | 2025-26 (02.03.2026 ರ ಅಂತ್ಯಕ್ಕೆ)) |
| 1 | ಬಾಗಲಕೋಟೆ | 27 | 31 | 33 | 27 |
| 2 | ಬಳ್ಳಾರಿ | 21 | 18 | 15 | 11 |
| 3 | ಬೆಂಗಳೂರು(ಗ್ರಾ) | 0 | 0 | 0 | 0 |
| 4 | ಬೆಂಗಳೂರು(ನ) | 0 | 1 | 0 | 1 |
| 5 | ಬೆಳಗಾವಿ | 87 | 119 | 104 | 64 |
| 6 | ಬೀದರ್ | 51 | 76 | 73 | 32 |
| 7 | ಚಾಮರಾಜನಗರ | 2 | 2 | 4 | 3 |
| 8 | ಚಿಕ್ಕಬಳ್ಳಾಪುರ | 4 | 3 | 3 | 1 |
| 9 | ಚಿಕ್ಕಮಗಳೂರು | 53 | 80 | 37 | 42 |
| 10 | ಚಿತ್ರದುರ್ಗ | 14 | 31 | 39 | 26 |
| 11 | ದಕ್ಷಿಣಕನ್ನಡ | 3 | 5 | 6 | 0 |
| 12 | ದಾವಣಗೆರೆ | 43 | 56 | 48 | 23 |
| 13 | ಧಾರವಾಡ | 81 | 102 | 77 | 31 |
| 14 | ಗದಗ | 42 | 33 | 52 | 27 |
| 15 | ಹಾಸನ | 39 | 43 | 48 | 40 |
| 16 | ಹಾವೇರಿ | 128 | 122 | 141 | 67 |
| 17 | ಕಲಬುರಗಿ | 60 | 88 | 106 | 61 |
| 18 | ಕೊಡಗು | 4 | 5 | 6 | 2 |
| 19 | ಕೋಲಾರ | 3 | 1 | 2 | 0 |
| 20 | ಕೊಪ್ಪಳ | 22 | 30 | 27 | 17 |
| 21 | ಮಂಡ್ಯ | 37 | 48 | 56 | 22 |
| 22 | ಮೈಸೂರು | 86 | 77 | 81 | 57 |
| 23 | ರಾಯಚೂರು | 27 | 22 | 24 | 17 |
| 24 | ಬೆಂಗಳೂರು ದಕ್ಷಿಣ | 0 | 7 | 3 | 1 |
| 25 | ಶಿವಮೊಗ್ಗ | 57 | 58 | 56 | 35 |
| 26 | ತುಮಕೂರು | 17 | 22 | 17 | 2 |
| 27 | ಉಡುಪಿ | 0 | 0 | 0 | 1 |
| 28 | ಉತ್ತರಕನ್ನಡ | 9 | 11 | 13 | 12 |
| 29 | ವಿಜಯಪುರ | 49 | 60 | 50 | 14 |
| 30 | ವಿಜಯನಗರ | 27 | 35 | 24 | 16 |
| 31 | ಯಾದಗಿರಿ | 56 | 71 | 49 | 19 |
| ಒಟ್ಟು | | 1049 | 1257 | 1194 | 671 |

## ಅನುಬಂಧ-2-ಎಲ್.ಸಿ.ಕ್ಯೂ 2074(2361)

**ರೈತರ ಅನುಕೂಲಕ್ಕಾಗಿ ಈ ಕೆಳಗಿನ ವಿವಿಧ ಯೋಜನೆ / ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.**

- ಬೀಜಗಳ ಪೂರೈಕೆ: ಬೀಜಗಳ ಪೂರೈಕೆ ಯೋಜನೆಯಡಿ ರಾಜ್ಯದ ಎಲ್ಲಾ ಪ [illegible] ರೈತರಿಗೆ ವಿವಿಧ ಕೃಷಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ.

- ಕೃಷಿ ಯಾಂತ್ರೀಕರಣ: ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಕೃಷಿ ಯಾಂತ್ರೀಕರಣ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ 45 ಪಿ.ಟಿ.ಓ ಹೆಚ್.ಪಿ ವರೆಗಿನ ಟ್ರ್ಯಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

- ಕೃಷಿ ಸಂಸ್ಕರಣೆ: ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

- 'ಸೂಕ್ಷ್ಮ ನೀರಾವರಿ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ, ಎಲ್ಲಾ ವರ್ಗದ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗೆ ಶೇ. 90ರ ಸಹಾಯಧನವನ್ನು ನೀಡಲಾಗುತ್ತಿದೆ.

- ಸಸ್ಯ ಸಂರಕ್ಷಣೆ: ಶೇ.50ರ ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ ಮಾಡಲಾಗುತ್ತಿದೆ.

- ರೈತ ಸಿರಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಬೆಳೆದ ಎಲ್ಲಾ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

- ಸಾವಯವ ಇಂಗಾಲ ಅಭಿಯಾನ: ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ.75 ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು.

- ಬೆಂಬಲ ಬೆಲೆ: ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಾಗು ಹಿಂಗಾರು ಹಂಗಾಮಿಗೆ ಮುಂಚಿತವಾಗಿ ಬೆಂಬಲ ಬೆಲೆ ಘೋಷಣೆ ಮಾಡುತ್ತಿದ್ದು, ಸಗಟು ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುವ ಸಂದರ್ಭಗಳಲ್ಲಿ ಬೆಂಬಲ ಬೆಲೆಯಲ್ಲಿ ರೈತರಿಂದ ಉತ್ಪನ್ನಗಳನ್ನು ಖರೀದಿಸಲಾಗುತ್ತಿದೆ. ಅಲ್ಲದೆ, ಅವಶ್ಯಕ ಸಂದರ್ಭಗಳಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಬೆಂಬಲ ಬೆಲೆಯ ಜೊತೆಗೆ ರಾಜ್ಯ ಸರ್ಕಾರದ ಪ್ರೋತ್ಸಾಹಧನವನ್ನೂ ಸಹ ನೀಡಲಾಗುತ್ತಿದೆ.

- ಹೊಸ ಬೆಳೆ ವಿಮಾ ಯೋಜನೆ: ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

- ಪಿ.ಎಂ.ಕಿಸಾನ್ ಯೋಜನೆ: ಈ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಎಲ್ಲಾ ಅರ್ಹ ರೈತ ಕುಟುಂಬಗಳಿಗೆ ರೂ.6000 ಗಳನ್ನು 3 ಕಂತುಗಳಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ.

➢ ಬೆಳೆ ಪರಿಹಾರ: ಪ್ರಾಕೃತಿಕ ವಿಕೋಪಗಳಿಂದ ಬೆಳೆಹಾನಿ ಸಂಭವಿಸಿದಲ್ಲಿ, ರಾಷ್ಟ್ರ ಹಾಗೂ ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೈತರಿಗೆ ಪರಿಹಾರ ನೀಡಲಾಗುತ್ತಿದೆ.

➢ ಕೃಷಿ ಆವರ್ತ ನಿಧಿ: ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಬೆಲೆ ಕುಸಿತವಾದಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶಕ್ಕಾಗಿ ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಆವರ್ತ ನಿಧಿಯನ್ನು ನಿರ್ವಹಿಸಲಾಗುತ್ತಿದೆ.

➢ ಬೆಳೆ ಸಾಲಕ್ಕೆ ಸಹಾಯಧನ : ಈ ಯೋಜನೆಯಡಿ ವಾಣಿಜ್ಯ ಬ್ಯಾಂಕುಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಲ್ಲಿ ಅಲ್ಪಾವಧಿ ಸಾಲ ಪಡೆದ ರೈತರಿಗೆ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ (SLBC) ಮೂಲಕ ಸಾಲದ ಮೊತ್ತ ರೂ.1.00,000/- ಮಿತಿಯೊಳಗಿನ ಬೆಳೆ ಸಾಲ/ಅಲ್ಪಾವಧಿ ಕೃಷಿ ಸಾಲವನ್ನು ಬ್ಯಾಂಕ್ ನಿಗದಿಪಡಿಸಿದ ಅವಧಿಯೊಳಗೆ ಪಾವತಿಸಿದ ರೈತರಿಗೆ ಶೇ.1 ರ ಬಡ್ಡಿ ರಿಯಾಯಿತಿ ನೀಡಲಾಗುವುದು.

➢ ಕೃಷಿ ಭಾಗ್ಯ: ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಹೊಂಡದಿಂದ ನೀರು ಎತ್ತಲು ಡೀಸಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರ ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ ಸೂಕ್ಷ್ಮ (ತುಂತುರು/ಹನಿ) ನೀರಾವರಿ ಘಟಕಗಳ ಅಳವಡಿಕೆಗೆ ಶೇ.90 ರ ಸಹಾಯಧನವನ್ನು ಎಲ್ಲಾ ವರ್ಗದ ರೈತರಿಗೆ ನೀಡಲಾಗುತ್ತದೆ. ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರ ಸಹಾಯಧನವನ್ನು ಒದಗಿಸಲಾಗುತ್ತಿದೆ.

➢ ಹೈಟೆಕ್ ಹಾರ್ವೆಸ್ಟರ್ ಹಬ್- ಹೈಟೆಕ್ ಹಾರ್ವೆಸ್ಟರ್ ಹಬ್ ಗಳ ಸ್ಥಾಪನೆಗೆ ಶೇ.40 ರಿಂದ ಶೇ.70 ರಷ್ಟು ಸಹಾಯಧನದಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳು, ಇತರ ಸಂಘ-ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಠ ರೂ.100.00 ಲಕ್ಷಗಳಿಗೆ ಮೀರದಂತೆ ಅನುದಾನ ನೀಡಲಾಗುತ್ತದೆ.

➢ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಕಾರ್ಯಕ್ರಮದಡಿ ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ" ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆಗೆ ಕ್ರಮ ಕೈಗೊಳ್ಳಲಾಗಿದೆ.

- ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds): ವಿವಿಧ ಆಹಾರ ಬೆಳೆಗಳು, ದ್ವಿದಳ ಧಾನ್ಯಗಳು, ಹತ್ತಿ, ಕಬ್ಬು ಮತ್ತು ಎಣ್ಣೆ ಕಾಳು ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನದಡಿ ನೀಡಲಾಗುತ್ತದೆ.

- ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸಾಂತ್ವನ/ಆತ್ಮಸ್ಥೈರ್ಯ ತುಂಬಲು ಹಿರಿಯ ಅಧಿಕಾರಿಗಳೊಂದಿಗೆ ಇನ್ಸ್‌ಪೆಕ್ಟರ್ ಆಫ್ ಪೋಲೀಸ್, ತಹಶೀಲ್ದಾರ್‌ರವರು ಮತ್ತು ಸಹಾಯಕ ಕೃಷಿ ನಿರ್ದೇಶಕರು ಮನೆಗಳಿಗೆ ಭೇಟಿ ನೀಡುತ್ತಾರೆ. ಅಷ್ಟೇ ಅಲ್ಲದೆ ಸರ್ಕಾರದ ವಿವಿಧ ಸವಲತ್ತುಗಳನ್ನು ಅಂತಹ ಕುಟುಂಬಗಳಿಗೆ ತಲುಪಿಸಲು ಜಿಲ್ಲಾ ಮಟ್ಟದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಅರ್ಹ ರೈತ ಆತ್ಮಹತ್ಯೆ ಪ್ರಕರಣಗಳಿಗೆ ರೂ.5.00 ಲಕ್ಷ ಪರಿಹಾರ ಧನವನ್ನು ಮೃತ ವ್ಯಕ್ತಿಯ ವಾರಸುದಾರರಿಗೆ ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಇಲಾಖೆಯಿಂದ ನೀಡಲಾಗುತ್ತಿದೆ. ಇಲಾಖೆಯ ಎಲ್ಲಾ ತರಬೇತಿಗಳಲ್ಲಿ ರೈತರಿಗೆ ಆತ್ಮಸ್ಥೈರ್ಯ ತುಂಬುವ ಕುರಿತು ಅರಿವು ಮೂಡಿಸಲಾಗುತ್ತಿದೆ.

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ: | 2361 |
| ಸದಸ್ಯರ ಹೆಸರು: | ಶ್ರೀ ಗೋವಿಂದ ರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | 27-03-2026 |
| ಉತ್ತರಿಸುವ ಸಚಿವರು: | ಕೃಷಿ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ 3 ವರ್ಷದಿಂದ ಇಲ್ಲಿಯವರೆಗೂ ನಡೆದಿರುವ ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)</td><td>ರಾಜ್ಯದಲ್ಲಿ 2022-23 ನೇ ಸಾಲಿನಿಂದ 2025-26ನೇ ಸಾಲಿನವರೆಗೆ (02.03.2026 ರವರೆಗೆ) ಅನುಕ್ರಮವಾಗಿ 1049, 1257, 1194 ಮತ್ತು 671 ಒಟ್ಟು 4171 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುತ್ತವೆ<br>ವರ್ಷವಾರು ಹಾಗೂ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ.</td></tr>
<tr><td>ಆ)</td><td>ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಸರ್ಕಾರದಿಂದ ನೀಡಲಾಗಿರುವ ಪರಿಹಾರ ಏನು ಹಾಗೂ ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಸರ್ಕಾರದ ಆದೇಶ ಸಂಖ್ಯೆ:ಕೃಇ 57 ಕೃಉಇ 2015 (ಭಾಗ-1) ದಿನಾಂಕ:11.11.2015ರ ರನ್ವಯ ಕೃಷಿ ಸಾಲದ ಹೊರೆಯಿಂದ ಆತ್ಮಹತ್ಯೆಗೆ ಶರಣಾದ ಅರ್ಹ ರೈತ ಕುಟುಂಬದ ವಾರಸುದಾರರಿಗೆ ರೂ.5.00 ಲಕ್ಷಗಳ ಮೊತ್ತವನ್ನು ಪರಿಹಾರವಾಗಿ ಪಾವತಿಸಲಾಗುತ್ತಿದೆ. (ಪ್ರತಿ ಲಗತ್ತಿಸಿದೆ.) ಪ್ರಸ್ತುತ ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಪರಿಹಾರ ನೀಡುವ ವಿಷಯವು ಕಂದಾಯ ಇಲಾಖೆಗೆ ಒಳಪಡುತ್ತದೆ.<br>ರೈತರ ಆತ್ಮಹತ್ಯೆ ತಡೆಯಲು ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ಅನುಬಂಧ-2 ರಲ್ಲಿ ನೀಡಲಾಗಿದೆ.</td></tr>
<tr><td>ಇ)</td><td>ರಾಜ್ಯದಲ್ಲಿ ಕಳೆದ 3 ವರ್ಷಗಳ ಅವಧಿಯಲ್ಲಿ 2416 ಮಂದಿ ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ (2022-23 ರಿಂದ 2024-25 ರವರೆಗೆ) ಒಟ್ಟು 3500 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುತ್ತವೆ.<br>ಕಳೆದ 3 ವರ್ಷಗಳ ಪರಿಹಾರ ಪಾವತಿಸಿರುವ ಮಾಹಿತಿಯು ಈ ಕೆಳಕಂಡಂತಿದೆ.
<table>
<tr><th>ಯೋಜನೆ</th><th>2023-24</th><th>2024-25</th><th>2025-26 (ಈವರೆವಿಗೂ)</th></tr>
<tr><td>ರೈತರ ಆತ್ಮಹತ್ಯೆ ಪ್ರಕರಣ</td><td>1080</td><td>986</td><td>468</td></tr>
</table>
</td></tr>
</table>

| | | |
|---|---|---|
| ಈ) | ರೈತರ ಆತ್ಮಹತ್ಯೆಯನ್ನು ಯಾವ ಕಾರಣಗಳಿಂದ ಮಾಡಿಕೊಳ್ಳುತ್ತಿದ್ದಾರೆ ಎಂಬುದು ಸರ್ಕಾರ ಪರಿಶೀಲಿಸಿದೆಯೇ; | ವಿವಿಧ ಸಮಿತಿ/ಮೂಲಗಳ ಪ್ರಕಾರ ಆತ್ಮಹತ್ಯೆಗೆ ಆರ್ಥಿಕ ಪರಿಸ್ಥಿತಿ, ಸಾಮಾಜಿಕ ಮತ್ತು ಸಾಂಸಾರಿಕ ಸಮಸ್ಯೆಗಳು, ಸಾಮರ್ಥ್ಯಕ್ಕೆ ಮೀರಿದ ಸಾಲ, ಬೆಳೆ ನಷ್ಟ, ಪ್ರಕೃತಿ ವಿಕೋಪ, ಸಾಲ ಬಾಧೆ, ಹವಾಮಾನ ವೈಪರೀತ್ಯಗಳು, ಅನಾರೋಗ್ಯ, ಕೌಟುಂಬಿಕ ಕಾರಣಗಳು ಹಾಗೂ ಇತರೆ ವಿವಿಧ ಸಮಸ್ಯೆಗಳು ಕಾರಣಗಳಾಗಿರುತ್ತವೆ. |
| ಉ) | ಕಳೆದ 3 ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ಮೊತ್ತದ ರೈತರ ಸಾಲ ಮನ್ನಾ ಮಾಡಲಾಗಿದೆ ಹಾಗೂ ಕೇಂದ್ರ ಸರ್ಕಾರದಿಂದ ಎಷ್ಟು ಫಲಾನುಭವಿಗಳಿಗೆ ಆರ್ಥಿಕ ನೆರವು ದೊರೆತಿದೆ; | ಕಳೆದ 03 ವರ್ಷದಿಂದ ಸಹಕಾರ ಸಂಸ್ಥೆಗಳಲ್ಲಿ ರೈತರ ಯಾವುದೇ ಸಾಲವನ್ನು ಸರ್ಕಾರದಿಂದ ಮನ್ನಾ ಮಾಡಿರುವುದಿಲ್ಲ.<br>ಕೇಂದ್ರ ಸರ್ಕಾರದ ರೂ.3.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಸಹಕಾರ ಸಂಘಗಳ ಮೂಲಕ ರೈತರಿಗೆ ನಿವ್ವಳ ಶೇ.4.ರ ಬಡ್ಡಿದರದಲ್ಲಿ ವಿತರಿಸುವ ಯೋಜನೆಯನ್ನು ನಬಾರ್ಡ್ ನಿರ್ವಹಿಸುತ್ತಿದೆ. |
| ಊ) | ರೈತರ ನೆರವಿಗೆ ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ನೀಡಲಾಗುತ್ತಿರುವ ಯೋಜನೆಗಳು ಯಾವುವು? | ಸಹಕಾರ ಇಲಾಖೆಯಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ಈ ಕೆಳಕಂಡ ಬಡ್ಡಿ ಸಹಾಯಧನ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ<br>1) ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ/ ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ನಿವ್ವಳ ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ.<br>2) ರೂ.15.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು ಶೇ.3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>3) ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ವಿತರಿಸುವ ಅಡಮಾನ ಸಾಲವನ್ನು ಶೇ.7 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>4) ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಸಹಕಾರ ಸಂಘಗಳು ಏಳು ಲಕ್ಷ ರೂ.ವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>5) ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಗೋದಾಮು ಅನುವಾಗುವಂತೆ ನಿರ್ಮಿಸಲು ಬ್ಯಾಂಕುಗಳು ನೀಡುವ 20 ಲಕ್ಷ ರೂ.ವರೆಗಿನ ಸಾಲಕ್ಕೆ ಸರ್ಕಾರ ಶೇ.7 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನ.<br>6)ರೈತರಿಗೆ ಇರುವ ಕೇಂದ್ರ ಸರ್ಕಾರದ ಯೋಜನೆ: ಸಹಕಾರ ಸಂಘಗಳ ಮೂಲಕ ರೈತರಿಗೆ ಪಶುಸಂಗೋಪನೆ/ಮೀನುಗಾರಿಕೆ |

| | | |
|---|---|---|
| | | ಉದ್ದೇಶಗಳಿಗೆ ರೂ.2.00 ಲಕ್ಷಗಳ ದುಡಿಯುವ ಬಂಡವಾಳದ ಸಾಲ ಒಳಗೊಂಡಂತೆ ರೂ.3.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲ ಶೇ.7ರ ಬಡ್ಡಿ ದರದಲ್ಲಿ ನೀಡಲಾಗುತ್ತಿದ್ದು, ಮರುಪಾವತಿಗೆ ನಿಗದಿಪಡಿಸಿದ ಅವಧಿಯೊಳಗೆ ರೈತರು ಸಾಲ ಮರುಪಾವತಿಸಿದಲ್ಲಿ ಶೇ.3 ರ ಪ್ರೋತ್ಸಾಹ ಧನ ದೊರೆಯುವುದರಿಂದ ರೈತರಿಗೆ ನಿವ್ವಳ ಶೇ.4 ರ ಬಡ್ಡಿ ದರದಲ್ಲಿ ಬೆಳೆ ಸಾಲ ದೊರೆಯುವ ಯೋಜನೆ ನಬಾರ್ಡ್ ಮೂಲಕ ಜಾರಿಯಲ್ಲಿದೆ.<br><br>2025-26ನೇ ಸಾಲಿನಲ್ಲಿ ರೈತರ ನೆರವಿಗಾಗಿ ಕೃಷಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳು ಈ ಕೆಳಕಂಡಂತಿವೆ:<br>1. ಮುಖ್ಯಮಂತ್ರಿ ರೈತ ವಿದ್ಯಾನಿಧಿ<br>2. ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ<br>3. ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು<br>4. ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ<br>5. ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು<br>6. ಹೊಸ ಬೆಳೆ ವಿಮಾ ಯೋಜನೆ<br>7. ಬೆಳೆ ಸಮೀಕ್ಷೆ<br>8. ಕೃಷಿ ಭಾಗ್ಯ<br>9. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ರಾಜ್ಯದ ಹೆಚ್ಚುವರಿ ಪಾಲಿನ ಅನುದಾನ<br>10. ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ (ಕೃಷೋನ್ನತಿ ಯೋಜನೆ)<br>11. ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ NFSNM-ಬೀಜ ಘಟಕಗಳು<br>12. PM-RKVY- ಬೆಳೆ ವೈವಿಧ್ಯೀಕರಣ ಯೋಜನೆ<br>13. ಕೃಷಿ ವಿಸ್ತರಣೆ (ATMA)<br>14. PM-RKVY- ಕೃಷಿ ಯಾಂತ್ರೀಕರಣ ಉಪ ಅಭಿಯಾನ<br>15. ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ಎಣ್ಣೆಕಾಳು ಪ್ರಧಾನ ಮಂತ್ರಿ<br>16. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (PM-RKVY)<br>17. PM-RKVY-ಮಣ್ಣು ಆರೋಗ್ಯ ಮತ್ತು ಫಲವತ್ತತೆ (PM-RKVY-SH&F)<br>18. ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ<br>19. ಡಿಜಿಟಲ್ ಬೆಳೆ ಸಮೀಕ್ಷೆ |

| | | |
|---|---|---|
| | | 20. ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತೆ ಅಭಿಯಾನ<br>ರೈತರ ನೆರವಿಗೆ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನದಲ್ಲಿರುವ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳು ಕೆಳಕಂಡಂತಿವೆ;<br>1. ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC-PMKSY 2.0)<br>2. ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD-RKVY)<br>3. ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆ<br>4. ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ - ಇತರೆ ಉಪಚಾರಗಳು (PMKSY - OI)<br>5. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RKVY-RPS) |

P.M. Narendraswamy

**(ಪಿ.ಎಂ. ನರೇಂದ್ರಸ್ವಾಮಿ)**

ಕೃಷಿ ಸಚಿವರು

| ಅನುಬಂಧ-1 ಎಲ್.ಸಿ.ಕ್ರ 2074(2161) | | | | | |
|---|---|---|---|---|---|
| ರೈತರ ಆತ್ಮಹತ್ಯೆ ವರದಿ ಪ್ರಕರಣಗಳು | | | | | |
| ಕ್ರ. ಸಂ | ಜಿಲ್ಲೆಗಳು | 2022-23 | 2023-24 | 2024-25 | 2025-26 (02.03.2026 ರ ಅಂತ್ಯಕ್ಕೆ) ) |
| 1 | ಬಾಗಲಕೋಟೆ | 27 | 31 | 33 | 27 |
| 2 | ಬಳ್ಳಾರಿ | 21 | 18 | 15 | 11 |
| 3 | ಬೆಂಗಳೂರು(ಗ್ರಾ) | 0 | 0 | 0 | 0 |
| 4 | ಬೆಂಗಳೂರು(ನ) | 0 | 1 | 0 | 1 |
| 5 | ಬೆಳಗಾವಿ | 87 | 119 | 104 | 64 |
| 6 | ಬೀದರ್ | 51 | 76 | 73 | 32 |
| 7 | ಚಾಮರಾಜನಗರ | 2 | 2 | 4 | 3 |
| 8 | ಚಿಕ್ಕಬಳ್ಳಾಪುರ | 4 | 3 | 3 | 1 |
| 9 | ಚಿಕ್ಕಮಗಳೂರು | 53 | 80 | 37 | 42 |
| 10 | ಚಿತ್ರದುರ್ಗ | 14 | 31 | 39 | 26 |
| 11 | ದಕ್ಷಿಣಕನ್ನಡ | 3 | 5 | 6 | 0 |
| 12 | ದಾವಣಗೆರೆ | 43 | 56 | 48 | 23 |
| 13 | ಧಾರವಾಡ | 81 | 102 | 77 | 31 |
| 14 | ಗದಗ | 42 | 33 | 52 | 27 |
| 15 | ಹಾಸನ | 39 | 43 | 48 | 40 |
| 16 | ಹಾವೇರಿ | 128 | 122 | 141 | 67 |
| 17 | ಕಲಬುರಗಿ | 60 | 88 | 106 | 61 |
| 18 | ಕೊಡಗು | 4 | 5 | 6 | 2 |
| 19 | ಕೋಲಾರ | 3 | 1 | 2 | 0 |
| 20 | ಕೊಪ್ಪಳ | 22 | 30 | 27 | 17 |
| 21 | ಮಂಡ್ಯ | 37 | 48 | 56 | 22 |
| 22 | ಮೈಸೂರು | 86 | 77 | 81 | 57 |
| 23 | ರಾಯಚೂರು | 27 | 22 | 24 | 17 |
| 24 | ಬೆಂಗಳೂರು ದಕ್ಷಿಣ | 0 | 7 | 3 | 1 |
| 25 | ಶಿವಮೊಗ್ಗ | 57 | 58 | 56 | 35 |
| 26 | ತುಮಕೂರು | 17 | 22 | 17 | 2 |
| 27 | ಉಡುಪಿ | 0 | 0 | 0 | 1 |
| 28 | ಉತ್ತರಕನ್ನಡ | 9 | 11 | 13 | 12 |
| 29 | ವಿಜಯಪುರ | 49 | 60 | 50 | 14 |
| 30 | ವಿಜಯನಗರ | 27 | 35 | 24 | 16 |
| 31 | ಯಾದಗಿರಿ | 56 | 71 | 49 | 19 |
| ಒಟ್ಟು | | **1049** | **1257** | **1194** | **671** |

## ಅನುಬಂಧ-2-ಎಲ್.ಸಿ.ಕ್ಯೂ 2074(2361)

**ರೈತರ ಅನುಕೂಲಕ್ಕಾಗಿ ಈ ಕೆಳಗಿನ ವಿವಿಧ ಯೋಜನೆ / ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.**

- ಬೀಜಗಳ ಪೂರೈಕೆ: ಬೀಜಗಳ ಪೂರೈಕೆ ಯೋಜನೆಯಡಿ ರಾಜ್ಯದ ಎಲ್ಲಾ ವ... ರೈತರಿಗೆ ವಿವಿಧ ಕೃಷಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ.

- ಕೃಷಿ ಯಾಂತ್ರೀಕರಣ: ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಕೃಷಿ ಯಾಂತ್ರೀಕರಣ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ 45 ಪಿ.ಟಿ.ಓ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

- ಕೃಷಿ ಸಂಸ್ಕರಣೆ: ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

- 'ಸೂಕ್ಷ್ಮ ನೀರಾವರಿ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ, ಎಲ್ಲಾ ವರ್ಗದ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗೆ ಶೇ. 90ರ ಸಹಾಯಧನವನ್ನು ನೀಡಲಾಗುತ್ತಿದೆ.

- ಸಸ್ಯ ಸಂರಕ್ಷಣೆ: ಶೇ.50ರ ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ ಮಾಡಲಾಗುತ್ತಿದೆ.

- ರೈತ ಸಿರಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಬೆಳೆದ ಎಲ್ಲಾ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

- ಸಾವಯವ ಇಂಗಾಲ ಅಭಿಯಾನ: ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ.75 ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು.

- ಬೆಂಬಲ ಬೆಲೆ: ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಾಗು ಹಿಂಗಾರು ಹಂಗಾಮಿಗೆ ಮುಂಚಿತವಾಗಿ ಬೆಂಬಲ ಬೆಲೆ ಘೋಷಣೆ ಮಾಡುತ್ತಿದ್ದು, ಸಗಟು ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುವ ಸಂದರ್ಭಗಳಲ್ಲಿ ಬೆಂಬಲ ಬೆಲೆಯಲ್ಲಿ ರೈತರಿಂದ ಉತ್ಪನ್ನಗಳನ್ನು ಖರೀದಿಸಲಾಗುತ್ತಿದೆ. ಅಲ್ಲದೆ, ಅವಶ್ಯಕ ಸಂದರ್ಭಗಳಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಬೆಂಬಲ ಬೆಲೆಯ ಜೊತಗೆ ರಾಜ್ಯ ಸರ್ಕಾರದ ಪ್ರೋತ್ಸಾಹಧನವನ್ನೂ ಸಹ ನೀಡಲಾಗುತ್ತಿದೆ.

- ಹೊಸ ಬೆಳೆ ವಿಮಾ ಯೋಜನೆ: ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

- ಪಿ.ಎಂ.ಕಿಸಾನ್ ಯೋಜನೆ: ಈ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಎಲ್ಲಾ ಅರ್ಹ ರೈತ ಕುಟುಂಬಗಳಿಗೆ ರೂ.6000 ಗಳನ್ನು 3 ಕಂತುಗಳಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ.

- ಬೆಳೆ ಪರಿಹಾರ: ಪ್ರಾಕೃತಿಕ ವಿಕೋಪಗಳಿಂದ ಬೆಳೆಹಾನಿ ಸಂಭವಿಸಿದಲ್ಲಿ, ರಾಷ್ಟ್ರ ಹಾಗೂ ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೈತರಿಗೆ ಪರಿಹಾರ ನೀಡಲಾಗುತ್ತಿದೆ.

- ಕೃಷಿ ಆವರ್ತ ನಿಧಿ: ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಬೆಲೆ ಕುಸಿತವಾದಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶಕ್ಕಾಗಿ ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಆವರ್ತ ನಿಧಿಯನ್ನು ನಿರ್ವಹಿಸಲಾಗುತ್ತಿದೆ.

- ಬೆಳೆ ಸಾಲಕ್ಕೆ ಸಹಾಯಧನ : ಈ ಯೋಜನೆಯಡಿ ವಾಣಿಜ್ಯ ಬ್ಯಾಂಕುಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಲ್ಲಿ ಅಲ್ಪಾವಧಿ ಸಾಲ ಪಡೆದ ರೈತರಿಗೆ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ (SLBC) ಮೂಲಕ ಸಾಲದ ಮೊತ್ತ ರೂ.1.00,000/- ಮಿತಿಯೊಳಗಿನ ಬೆಳೆ ಸಾಲ/ಅಲ್ಪಾವಧಿ ಕೃಷಿ ಸಾಲವನ್ನು ಬ್ಯಾಂಕ್ ನಿಗದಿಪಡಿಸಿದ ಅವಧಿಯೊಳಗೆ ಪಾವತಿಸಿದ ರೈತರಿಗೆ ಶೇ.1 ರ ಬಡ್ಡಿ ರಿಯಾಯಿತಿ ನೀಡಲಾಗುವುದು.

- ಕೃಷಿ ಭಾಗ್ಯ: ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಹೊಂಡದಿಂದ ನೀರು ಎತ್ತಲು ಡೀಸಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರ ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ ಸೂಕ್ಷ್ಮ (ತುಂತುರು/ಹನಿ) ನೀರಾವರಿ ಘಟಕಗಳ ಅಳವಡಿಕೆಗೆ ಶೇ.90 ರ ಸಹಾಯಧನವನ್ನು ಎಲ್ಲಾ ವರ್ಗದ ರೈತರಿಗೆ ನೀಡಲಾಗುತ್ತದೆ. ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರ ಸಹಾಯಧನವನ್ನು ಒದಗಿಸಲಾಗುತ್ತಿದೆ.

- ಹೈಟೆಕ್ ಹಾರ್ವೆಸ್ಟರ್ ಹಬ್- ಹೈಟೆಕ್ ಹಾರ್ವೆಸ್ಟರ್ ಹಬ್ ಗಳ ಸ್ಥಾಪನೆಗೆ ಶೇ.40 ರಿಂದ ಶೇ.70 ರಷ್ಟು ಸಹಾಯಧನದಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳು, ಇತರೆ ಸಂಘ-ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಠ ರೂ.100.00 ಲಕ್ಷಗಳಿಗೆ ಮೀರದಂತೆ ಅನುದಾನ ನೀಡಲಾಗುತ್ತದೆ.

- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಕಾರ್ಯಕ್ರಮದಡಿ ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ" ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆಗೆ ಕ್ರಮ ಕೈಗೊಳ್ಳಲಾಗಿದೆ.

- ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds): ವಿವಿಧ ಆಹಾರ ಬೆಳೆಗಳು, ದ್ವಿದಳ ಧಾನ್ಯಗಳು, ಹತ್ತಿ, ಕಬ್ಬು ಮತ್ತು ಎಣ್ಣೆ ಕಾಳು ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನದಡಿ ನೀಡಲಾಗುತ್ತದೆ.

- ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸಾಂತ್ವನ/ಆತ್ಮಸ್ಥೈರ್ಯ ತುಂಬಲು ಹಿರಿಯ ಅಧಿಕಾರಿಗಳೊಂದಿಗೆ ಇನ್ಸ್‌ಪೆಕ್ಟರ್ ಆಫ್ ಪೊಲೀಸ್, ತಹಶೀಲ್ದಾರ್‌ರವರು ಮತ್ತು ಸಹಾಯಕ ಕೃಷಿ ನಿರ್ದೇಶಕರು ಮನೆಗಳಿಗೆ ಭೇಟಿ ನೀಡುತ್ತಾರೆ. ಅಷ್ಟೇ ಅಲ್ಲದೆ ಸರ್ಕಾರದ ವಿವಿಧ ಸವಲತ್ತುಗಳನ್ನು ಅಂತಹ ಕುಟುಂಬಗಳಿಗೆ ತಲುಪಿಸಲು ಜಿಲ್ಲಾ ಮಟ್ಟದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಅರ್ಹ ರೈತ ಆತ್ಮಹತ್ಯೆ ಪ್ರಕರಣಗಳಿಗೆ ರೂ.5.00 ಲಕ್ಷ ಪರಿಹಾರ ಧನವನ್ನು ಮೃತ ವ್ಯಕ್ತಿಯ ವಾರಸುದಾರರಿಗೆ ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಇಲಾಖೆಯಿಂದ ನೀಡಲಾಗುತ್ತಿದೆ. ಇಲಾಖೆಯ ಎಲ್ಲಾ ತರಬೇತಿಗಳಲ್ಲಿ ರೈತರಿಗೆ ಆತ್ಮಸ್ಥೈರ್ಯ ತುಂಬುವ ಕುರಿತು ಅರಿವು ಮೂಡಿಸಲಾಗುತ್ತಿದೆ.

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ: 2361
ಸದಸ್ಯರ ಹೆಸರು: ಶ್ರೀ ಗೋವಿಂದ ರಾಜು
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ: 27-03-2026
ಉತ್ತರಿಸುವ ಸಚಿವರು: ಕೃಷಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷದಿಂದ ಇಲ್ಲಿಯವರೆಗೂ ನಡೆದಿರುವ ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು) | ರಾಜ್ಯದಲ್ಲಿ 2022-23 ನೇ ಸಾಲಿನಿಂದ 2025-26ನೇ ಸಾಲಿನವರೆಗೆ (02.03.2026 ರವರೆಗೆ) ಅನುಕ್ರಮವಾಗಿ 1049, 1257, 1194 ಮತ್ತು 671 ಒಟ್ಟು 4171 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುತ್ತವೆ<br>ವರ್ಷವಾರು ಹಾಗೂ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಸರ್ಕಾರದಿಂದ ನೀಡಲಾಗಿರುವ ಪರಿಹಾರ ಏನು ಹಾಗೂ ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ:ಕೃಇ 57 ಕೃಉಇ 2015 (ಭಾಗ-1) ದಿನಾಂಕ:11.11.2015ರ ರನ್ವಯ ಕೃಷಿ ಸಾಲದ ಹೊರೆಯಿಂದ ಆತ್ಮಹತ್ಯೆಗೆ ಶರಣಾದ ಅರ್ಹ ರೈತ ಕುಟುಂಬದ ವಾರಸುದಾರರಿಗೆ ರೂ.5.00 ಲಕ್ಷಗಳ ಮೊತ್ತವನ್ನು ಪರಿಹಾರವಾಗಿ ಪಾವತಿಸಲಾಗುತ್ತಿದೆ. (ಪ್ರತಿ ಲಗತ್ತಿಸಿದೆ.) ಪ್ರಸ್ತುತ ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಪರಿಹಾರ ನೀಡುವ ವಿಷಯವು ಕಂದಾಯ ಇಲಾಖೆಗೆ ಒಳಪಡುತ್ತದೆ.<br>ರೈತರ ಆತ್ಮಹತ್ಯೆ ತಡೆಯಲು ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ಅನುಬಂಧ-2 ರಲ್ಲಿ ನೀಡಲಾಗಿದೆ. |
| ಇ) | ರಾಜ್ಯದಲ್ಲಿ ಕಳೆದ 3 ವರ್ಷಗಳ ಅವಧಿಯಲ್ಲಿ 2416 ಮಂದಿ ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ (2022-23 ರಿಂದ 2024-25 ರವರೆಗೆ) ಒಟ್ಟು 3500 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುತ್ತವೆ.<br>ಕಳೆದ 3 ವರ್ಷಗಳ ಪರಿಹಾರ ಪಾವತಿಸಿರುವ ಮಾಹಿತಿಯು ಈ ಕೆಳಕಂಡಂತಿದೆ. |

| **ಯೋಜನೆ** | **2023-24** | **2024-25** | **2025-26 (ಈವರೆವಿಗೂ)** |
|---|---|---|---|
| ರೈತರ ಆತ್ಮಹತ್ಯೆ ಪ್ರಕರಣ | 1080 | 986 | 468 |

| | | |
|---|---|---|
| ಈ) | ರೈತರ ಆತ್ಮಹತ್ಯೆಯನ್ನು ಯಾವ ಕಾರಣಗಳಿಂದ ಮಾಡಿಕೊಳ್ಳುತ್ತಿದ್ದಾರೆ ಎಂಬುದು ಸರ್ಕಾರ ಪರಿಶೀಲಿಸಿದೆಯೇ; | ವಿವಿಧ ಸಮಿತಿ/ಮೂಲಗಳ ಪ್ರಕಾರ ಆತ್ಮಹತ್ಯೆಗೆ ಆರ್ಥಿಕ ಪರಿಸ್ಥಿತಿ, ಸಾಮಾಜಿಕ ಮತ್ತು ಸಾಂಸಾರಿಕ ಸಮಸ್ಯೆಗಳು, ಸಾಮರ್ಥ್ಯಕ್ಕೆ ಮೀರಿದ ಸಾಲ, ಬೆಳೆ ನಷ್ಟ, ಪ್ರಕೃತಿ ವಿಕೋಪ, ಸಾಲ ಬಾಧೆ, ಹವಾಮಾನ ವೈಪರೀತ್ಯಗಳು, ಅನಾರೋಗ್ಯ, ಕೌಟುಂಬಿಕ ಕಾರಣಗಳು ಹಾಗೂ ಇತರೆ ವಿವಿಧ ಸಮಸ್ಯೆಗಳು ಕಾರಣಗಳಾಗಿರುತ್ತವೆ. |
| ಉ) | ಕಳೆದ 3 ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ಮೊತ್ತದ ರೈತರ ಸಾಲ ಮನ್ನಾ ಮಾಡಲಾಗಿದೆ ಹಾಗೂ ಕೇಂದ್ರ ಸರ್ಕಾರದಿಂದ ಎಷ್ಟು ಫಲಾನುಭವಿಗಳಿಗೆ ಆರ್ಥಿಕ ನೆರವು ದೊರೆತಿದೆ; | ಕಳೆದ 03 ವರ್ಷದಿಂದ ಸಹಕಾರ ಸಂಸ್ಥೆಗಳಲ್ಲಿ ರೈತರ ಯಾವುದೇ ಸಾಲವನ್ನು ಸರ್ಕಾರದಿಂದ ಮನ್ನಾ ಮಾಡಿರುವುದಿಲ್ಲ.<br>ಕೇಂದ್ರ ಸರ್ಕಾರದ ರೂ.3.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಸಹಕಾರ ಸಂಘಗಳ ಮೂಲಕ ರೈತರಿಗೆ ನಿವ್ವಳ ಶೇ.4.ರ ಬಡ್ಡಿದರದಲ್ಲಿ ವಿತರಿಸುವ ಯೋಜನೆಯನ್ನು ನಬಾರ್ಡ್ ನಿರ್ವಹಿಸುತ್ತಿದೆ. |
| ಊ) | ರೈತರ ನೆರವಿಗೆ ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ನೀಡಲಾಗುತ್ತಿರುವ ಯೋಜನೆಗಳು ಯಾವುವು? | ಸಹಕಾರ ಇಲಾಖೆಯಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ಈ ಕೆಳಕಂಡ ಬಡ್ಡಿ ಸಹಾಯಧನ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ<br>1) ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ/ ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ನಿವ್ವಳ ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ.<br>2) ರೂ.15.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು ಶೇ.3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>3) ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ವಿತರಿಸುವ ಅಡಮಾನ ಸಾಲವನ್ನು ಶೇ.7 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>4) ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಸಹಕಾರ ಸಂಘಗಳು ಏಳು ಲಕ್ಷ ರೂ.ವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>5) ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಗೋದಾಮು ಅನುವಾಗುವಂತೆ ನಿರ್ಮಿಸಲು ಬ್ಯಾಂಕುಗಳು ನೀಡುವ 20 ಲಕ್ಷ ರೂ.ವರೆಗಿನ ಸಾಲಕ್ಕೆ ಸರ್ಕಾರ ಶೇ.7 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನ.<br>6)ರೈತರಿಗೆ ಇರುವ ಕೇಂದ್ರ ಸರ್ಕಾರದ ಯೋಜನೆ: ಸಹಕಾರ ಸಂಘಗಳ ಮೂಲಕ ರೈತರಿಗೆ ಪಶುಸಂಗೋಪನೆ/ಮೀನುಗಾರಿಕೆ |

| | | |
|---|---|---|
| | | ಉದ್ದೇಶಗಳಿಗೆ ರೂ.2.00 ಲಕ್ಷಗಳ ದುಡಿಯುವ ಬಂಡವಾಳದ ಸಾಲ ಒಳಗೊಂಡಂತೆ ರೂ.3.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲ ಶೇ.7ರ ಬಡ್ಡಿ ದರದಲ್ಲಿ ನೀಡಲಾಗುತ್ತಿದ್ದು, ಮರುಪಾವತಿಗೆ ನಿಗದಿಪಡಿಸಿದ ಅವಧಿಯೊಳಗೆ ರೈತರು ಸಾಲ ಮರುಪಾವತಿಸಿದಲ್ಲಿ ಶೇ.3 ರ ಪ್ರೋತ್ಸಾಹ ಧನ ದೊರೆಯುವುದರಿಂದ ರೈತರಿಗೆ ನಿವ್ವಳ ಶೇ.4 ರ ಬಡ್ಡಿ ದರದಲ್ಲಿ ಬೆಳೆ ಸಾಲ ದೊರೆಯುವ ಯೋಜನೆ ನಬಾರ್ಡ್ ಮೂಲಕ ಜಾರಿಯಲ್ಲಿದೆ.<br><br>2025-26ನೇ ಸಾಲಿನಲ್ಲಿ ರೈತರ ನೆರವಿಗಾಗಿ ಕೃಷಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳು ಈ ಕೆಳಕಂಡಂತಿವೆ:<br>1. ಮುಖ್ಯಮಂತ್ರಿ ರೈತ ವಿದ್ಯಾನಿಧಿ<br>2. ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ<br>3. ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು<br>4. ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ<br>5. ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು<br>6. ಹೊಸ ಬೆಳೆ ವಿಮಾ ಯೋಜನೆ<br>7. ಬೆಳೆ ಸಮೀಕ್ಷೆ<br>8. ಕೃಷಿ ಭಾಗ್ಯ<br>9. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ರಾಜ್ಯದ ಹೆಚ್ಚುವರಿ ಪಾಲಿನ ಅನುದಾನ<br>10. ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ (ಕೃಷೋನ್ನತಿ ಯೋಜನೆ)<br>11. ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ NFSNM-ಬೀಜ ಘಟಕಗಳು<br>12. PM-RKVY- ಬೆಳೆ ವೈವಿಧ್ಯೀಕರಣ ಯೋಜನೆ<br>13. ಕೃಷಿ ವಿಸ್ತರಣೆ (ATMA)<br>14. PM-RKVY- ಕೃಷಿ ಯಾಂತ್ರೀಕರಣ ಉಪ ಅಭಿಯಾನ<br>15. ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ಎಣ್ಣೆಕಾಳು ಪ್ರಧಾನ ಮಂತ್ರಿ<br>16. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (PM-RKVY)<br>17. PM-RKVY-ಮಣ್ಣು ಆರೋಗ್ಯ ಮತ್ತು ಫಲವತ್ತತೆ (PM-RKVY-SH&F)<br>18. ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ<br>19. ಡಿಜಿಟಲ್ ಬೆಳೆ ಸಮೀಕ್ಷೆ |

| | | |
|---|---|---|
| | | 20. ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತೆ ಅಭಿಯಾನ<br>ರೈತರ ನೆರವಿಗೆ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನದಲ್ಲಿರುವ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳು ಕೆಳಕಂಡಂತಿವೆ;<br>1. ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC-PMKSY 2.0)<br>2. ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD-RKVY)<br>3. ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆ<br>4. ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ - ಇತರೆ ಉಪಚಾರಗಳು (PMKSY - OI)<br>5. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RKVY-RPS) |

P. M. Narendraswamy

**(ಪಿ.ಎಂ. ನರೇಂದ್ರಸ್ವಾಮಿ)**
ಕೃಷಿ ಸಚಿವರು

| ಅನುಬಂಧ-1 ಎಲ್.ಸಿ.ಕ್ರ 2074(2161) | | | | | |
|---|---|---|---|---|---|
| ರೈತರ ಆತ್ಮಹತ್ಯೆ ವರದಿ ಪ್ರಕರಣಗಳು | | | | | |
| ಕ್ರ. ಸಂ | ಜಿಲ್ಲೆಗಳು | 2022-23 | 2023-24 | 2024-25 | 2025-26 (02.03.2026 ರ ಅಂತ್ಯಕ್ಕೆ) ) |
| 1 | ಬಾಗಲಕೋಟೆ | 27 | 31 | 33 | 27 |
| 2 | ಬಳ್ಳಾರಿ | 21 | 18 | 15 | 11 |
| 3 | ಬೆಂಗಳೂರು(ಗ್ರಾ) | 0 | 0 | 0 | 0 |
| 4 | ಬೆಂಗಳೂರು(ನ) | 0 | 1 | 0 | 1 |
| 5 | ಬೆಳಗಾವಿ | 87 | 119 | 104 | 64 |
| 6 | ಬೀದರ್ | 51 | 76 | 73 | 32 |
| 7 | ಚಾಮರಾಜನಗರ | 2 | 2 | 4 | 3 |
| 8 | ಚಿಕ್ಕಬಳ್ಳಾಪುರ | 4 | 3 | 3 | 1 |
| 9 | ಚಿಕ್ಕಮಗಳೂರು | 53 | 80 | 37 | 42 |
| 10 | ಚಿತ್ರದುರ್ಗ | 14 | 31 | 39 | 26 |
| 11 | ದಕ್ಷಿಣಕನ್ನಡ | 3 | 5 | 6 | 0 |
| 12 | ದಾವಣಗೆರೆ | 43 | 56 | 48 | 23 |
| 13 | ಧಾರವಾಡ | 81 | 102 | 77 | 31 |
| 14 | ಗದಗ | 42 | 33 | 52 | 27 |
| 15 | ಹಾಸನ | 39 | 43 | 48 | 40 |
| 16 | ಹಾವೇರಿ | 128 | 122 | 141 | 67 |
| 17 | ಕಲಬುರಗಿ | 60 | 88 | 106 | 61 |
| 18 | ಕೊಡಗು | 4 | 5 | 6 | 2 |
| 19 | ಕೋಲಾರ | 3 | 1 | 2 | 0 |
| 20 | ಕೊಪ್ಪಳ | 22 | 30 | 27 | 17 |
| 21 | ಮಂಡ್ಯ | 37 | 48 | 56 | 22 |
| 22 | ಮೈಸೂರು | 86 | 77 | 81 | 57 |
| 23 | ರಾಯಚೂರು | 27 | 22 | 24 | 17 |
| 24 | ಬೆಂಗಳೂರು ದಕ್ಷಿಣ | 0 | 7 | 3 | 1 |
| 25 | ಶಿವಮೊಗ್ಗ | 57 | 58 | 56 | 35 |
| 26 | ತುಮಕೂರು | 17 | 22 | 17 | 2 |
| 27 | ಉಡುಪಿ | 0 | 0 | 0 | 1 |
| 28 | ಉತ್ತರಕನ್ನಡ | 9 | 11 | 13 | 12 |
| 29 | ವಿಜಯಪುರ | 49 | 60 | 50 | 14 |
| 30 | ವಿಜಯನಗರ | 27 | 35 | 24 | 16 |
| 31 | ಯಾದಗಿರಿ | 56 | 71 | 49 | 19 |
| ಒಟ್ಟು | | 1049 | 1257 | 1194 | 671 |

## ಅನುಬಂಧ-2-ಎಲ್.ಸಿ.ಕ್ಯೂ 2074(2361)

**ರೈತರ ಅನುಕೂಲಕ್ಕಾಗಿ ಈ ಕೆಳಗಿನ ವಿವಿಧ ಯೋಜನೆ / ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.**

- ಬೀಜಗಳ ಪೂರೈಕೆ: ಬೀಜಗಳ ಪೂರೈಕೆ ಯೋಜನೆಯಡಿ ರಾಜ್ಯದ ಎಲ್ಲಾ ಷ ು ರೈತರಿಗೆ ವಿವಿಧ ಕೃಷಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ.

- ಕೃಷಿ ಯಾಂತ್ರೀಕರಣ: ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಕೃಷಿ ಯಾಂತ್ರೀಕರಣ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

- ಕೃಷಿ ಸಂಸ್ಕರಣೆ: ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

- 'ಸೂಕ್ಷ್ಮ ನೀರಾವರಿ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ, ಎಲ್ಲಾ ವರ್ಗದ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗೆ ಶೇ. 90ರ ಸಹಾಯಧನವನ್ನು ನೀಡಲಾಗುತ್ತಿದೆ.

- ಸಸ್ಯ ಸಂರಕ್ಷಣೆ: ಶೇ.50ರ ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ ಮಾಡಲಾಗುತ್ತಿದೆ.

- ರೈತ ಸಿರಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯಗಳನ್ನು ಬೆಳೆದ ಎಲ್ಲಾ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

- ಸಾವಯವ ಇಂಗಾಲ ಅಭಿಯಾನ: ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ.75 ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು.

- ಬೆಂಬಲ ಬೆಲೆ: ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಾಗು ಹಿಂಗಾರು ಹಂಗಾಮಿಗೆ ಮುಂಚಿತವಾಗಿ ಬೆಂಬಲ ಬೆಲೆ ಘೋಷಣೆ ಮಾಡುತ್ತಿದ್ದು, ಸಗಟು ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುವ ಸಂದರ್ಭಗಳಲ್ಲಿ ಬೆಂಬಲ ಬೆಲೆಯಲ್ಲಿ ರೈತರಿಂದ ಉತ್ಪನ್ನಗಳನ್ನು ಖರೀದಿಸಲಾಗುತ್ತಿದೆ. ಅಲ್ಲದೆ, ಅವಶ್ಯಕ ಸಂದರ್ಭಗಳಲ್ಲಿ ಕೇಂದ್ರ ಸರ್ಕಾರ ಘೋಷಿಸಿದ ಬೆಂಬಲ ಬೆಲೆಯ ಜೊತಗೆ ರಾಜ್ಯ ಸರ್ಕಾರದ ಪ್ರೋತ್ಸಾಹಧನವನ್ನೂ ಸಹ ನೀಡಲಾಗುತ್ತಿದೆ.

- ಹೊಸ ಬೆಳೆ ವಿಮಾ ಯೋಜನೆ: ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

- ಪಿ.ಎಂ.ಕಿಸಾನ್ ಯೋಜನೆ: ಈ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಎಲ್ಲಾ ಅರ್ಹ ರೈತ ಕುಟುಂಬಗಳಿಗೆ ರೂ.6000 ಗಳನ್ನು 3 ಕಂತುಗಳಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ.

- ಬೆಳೆ ಪರಿಹಾರ: ಪ್ರಾಕೃತಿಕ ವಿಕೋಪಗಳಿಂದ ಬೆಳೆಹಾನಿ ಸಂಭವಿಸಿದಲ್ಲಿ, ರಾಷ್ಟ್ರ ಹಾಗೂ ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೈತರಿಗೆ ಪರಿಹಾರ ನೀಡಲಾಗುತ್ತಿದೆ.

- ಕೃಷಿ ಆವರ್ತ ನಿಧಿ: ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಬೆಲೆ ಕುಸಿತವಾದಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶಕ್ಕಾಗಿ ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಆವರ್ತ ನಿಧಿಯನ್ನು ನಿರ್ವಹಿಸಲಾಗುತ್ತಿದೆ.

- ಬೆಳೆ ಸಾಲಕ್ಕೆ ಸಹಾಯಧನ : ಈ ಯೋಜನೆಯಡಿ ವಾಣಿಜ್ಯ ಬ್ಯಾಂಕುಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಲ್ಲಿ ಅಲ್ಪಾವಧಿ ಸಾಲ ಪಡೆದ ರೈತರಿಗೆ ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ (SLBC) ಮೂಲಕ ಸಾಲದ ಮೊತ್ತ ರೂ.1.00,000/- ಮಿತಿಯೊಳಗಿನ ಬೆಳೆ ಸಾಲ/ಅಲ್ಪಾವಧಿ ಕೃಷಿ ಸಾಲವನ್ನು ಬ್ಯಾಂಕ್ ನಿಗದಿಪಡಿಸಿದ ಅವಧಿಯೊಳಗೆ ಪಾವತಿಸಿದ ರೈತರಿಗೆ ಶೇ.1 ರ ಬಡ್ಡಿ ರಿಯಾಯಿತಿ ನೀಡಲಾಗುವುದು.

- ಕೃಷಿ ಭಾಗ್ಯ: ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಹೊಂಡದಿಂದ ನೀರು ಎತ್ತಲು ಡೀಸಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್ ಗಳಿಗೆ  ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರ ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ ಸೂಕ್ಷ್ಮ (ತುಂತುರು/ಹನಿ) ನೀರಾವರಿ ಘಟಕಗಳ ಅಳವಡಿಕೆಗೆ  ಶೇ.90 ರ ಸಹಾಯಧನವನ್ನು ಎಲ್ಲಾ ವರ್ಗದ ರೈತರಿಗೆ ನೀಡಲಾಗುತ್ತದೆ. ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರ ಸಹಾಯಧನವನ್ನು ಒದಗಿಸಲಾಗುತ್ತಿದೆ.

- ಹೈಟೆಕ್ ಹಾರ್ವೆಸ್ಟರ್ ಹಬ್- ಹೈಟೆಕ್ ಹಾರ್ವೆಸ್ಟರ್ ಹಬ್ ಗಳ ಸ್ಥಾಪನೆಗೆ ಶೇ.40 ರಿಂದ ಶೇ.70 ರಷ್ಟು ಸಹಾಯಧನದಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳು, ಇತರೆ ಸಂಘ-ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಟ ರೂ.100.00 ಲಕ್ಷಗಳಿಗೆ ಮೀರದಂತೆ ಅನುದಾನ ನೀಡಲಾಗುತ್ತದೆ.

- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಕಾರ್ಯಕ್ರಮದಡಿ ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ" ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆಗೆ ಕ್ರಮ ಕೈಗೊಳ್ಳಲಾಗಿದೆ.

- ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds): ವಿವಿಧ ಆಹಾರ ಬೆಳೆಗಳು, ದ್ವಿದಳ ಧಾನ್ಯಗಳು, ಹತ್ತಿ, ಕಬ್ಬು ಮತ್ತು ಎಣ್ಣೆ ಕಾಳು ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನದಡಿ ನೀಡಲಾಗುತ್ತದೆ.

- ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸಾಂತ್ವನ/ಆತ್ಮಸ್ಥೈರ್ಯ ತುಂಬಲು ಹಿರಿಯ ಅಧಿಕಾರಿಗಳೊಂದಿಗೆ ಇನ್ಸ್‌ಪೆಕ್ಟರ್ ಆಫ್ ಪೊಲೀಸ್, ತಹಶೀಲ್ದಾರ್‌ರವರು ಮತ್ತು ಸಹಾಯಕ ಕೃಷಿ ನಿರ್ದೇಶಕರು ಮನೆಗಳಿಗೆ ಭೇಟಿ ನೀಡುತ್ತಾರೆ. ಅಷ್ಟೇ ಅಲ್ಲದೆ ಸರ್ಕಾರದ ವಿವಿಧ ಸವಲತ್ತುಗಳನ್ನು ಅಂತಹ ಕುಟುಂಬಗಳಿಗೆ ತಲುಪಿಸಲು ಜಿಲ್ಲಾ ಮಟ್ಟದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಅರ್ಹ ರೈತ ಆತ್ಮಹತ್ಯೆ ಪ್ರಕರಣಗಳಿಗೆ ರೂ.5.00 ಲಕ್ಷ ಪರಿಹಾರ ಧನವನ್ನು ಮೃತ ವ್ಯಕ್ತಿಯ ವಾರಸುದಾರರಿಗೆ ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಇಲಾಖೆಯಿಂದ ನೀಡಲಾಗುತ್ತಿದೆ. ಇಲಾಖೆಯ ಎಲ್ಲಾ ತರಬೇತಿಗಳಲ್ಲಿ ರೈತರಿಗೆ ಆತ್ಮಸ್ಥೈರ್ಯ ತುಂಬುವ ಕುರಿತು ಅರಿವು ಮೂಡಿಸಲಾಗುತ್ತಿದೆ.